**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.1979/2023**

| | | |
|---|---|---|
| ಸಾಕ್ಷಿದಾರರ ಹೆಸರು | : ಹಸನಬ್ಬ ಪಿ.ಕೆ | ಪ್ರಾಸಾ-7 |
| ತಂದೆಯ ಹೆಸರು | : ಅಬ್ದುಲ್ ಖಾದರ್ | ಚಾಸಾ-5 |
| ವಯಸ್ಸು | : 65 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವ್ಯಾಪಾರ | ದಿನಾಂಕಃ 08.07.2025 |
| ವಾಸಸ್ಥಳ | : ಸಬ್ಬೇನಹಳ್ಳಿ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಸದರಿ ಪ್ರಕರಣದಲ್ಲಿರುವ ಮೃತ ಮಂಜುನಾಥ ರವರನ್ನು ನಾನು ಹಿಂದೆ ಎಂದೂ ನೋಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-6 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-10 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-10(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಅಮಾನತು ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ನಿಪಿ-2, 3 ಮತ್ತು 11 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ಕಳೆದ 2 ವರ್ಷದ ಹಿಂದೆ ಬಣಕಲ್ ಪೋಲಿಸ್ ಠಾಣೆಯ ಬಳಿ ಈ ಮೇಲಿನ ಸಹಿಯನ್ನು ಹಾಕಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರದ ಕುರಿತು ಹಾಕಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ಸದರಿ ಸಹಿಯನ್ನು ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ. ನಿಪಿ-10 ಮತ್ತು 12 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿದಿರುವುದಿಲ್ಲ. ನಿಪಿ-2, 3 ಮತ್ತು 11 ನ್ನು ಸದರಿ ಸಮಯದಲ್ಲಿ ತೆಗೆದಿರುತ್ತಾರೆ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಿಪಿ-10 ಮುತ್ತ 12 ಕ್ಕೆ ಸಹಿ ಮಾಡುವಾಗ ಸಂಜೆ ಸಮಯವಾಗಿತ್ತು. ನನ್ನ ಜೊತೆ ಇತರರು ಯಾರು ಸಹಿ ಮಾಡಿರುತ್ತಾರೆ ಎಂಬ ಬಗ್ಗೆ ನನಗೆ ತಿಳಿದಿರುವುದಿಲ್ಲ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಚಾರ ತಿಳಿದಿರುವುದಿಲ್ಲ. ನಾನು ಪೋಲಿಸರ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

## ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:

ಈಗ ಓದಿ ಹೇಳಿದಂತೆ ದಿ.14.05.2023 ರಂದು 17.00 ರಿಂದ 18.00 ರ ಸಮಯದಲ್ಲಿ ಮೃತ ಮಂಜುನಾಥ್ ರವರು ಮತಿಕಟ್ಟೆ ಸರ್ಕಲ್ ಬಳಿ ಅಪಘಾತ ಸಂಭವಿಸಿದ ಸ್ಥಳದ ಮಹಜರ್ ಸಮಯದಲ್ಲಿ ನಾನು ಮತ್ತು ಚಾಸಾ-6 ರವರು ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಚಾಸಾ-11 ರವರು ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ನಮ್ಮ ಸಮಕ್ಷಮ ನಿಪಿ-10 ನ್ನು ಬರೆಯಲಾಗಿರುತ್ತದೆ ಎಂದರೆ ಸರಿಯಲ್ಲ. ಅದೇ ರೀತಿ ದಿ.17.05.2023 ರಂದು ಬಣಕಲ್ ಪೋಲಿಸ್ ಠಾಣಾ ಆವರಣದಲ್ಲಿ 17.00 ರಿಂದ 18.00 ರ ಸಮಯದಲ್ಲಿ KA-21-C-4813 ಎಂಬ EICHER ವಾಹನವನ್ನು ನಮ್ಮ ಸಮಕ್ಷಮ ವಶಪಡಿಸಿಕೊಂಡ ಸಮಯದಲ್ಲಿ ನಿಪಿ-12 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ನಿಪಿ-2 ಮತ್ತು 3 ತೆಗೆಯಲಾಗಿರುತ್ತದೆ ಎಂದರೆ ಸಾಕ್ಷಿಯು ಫೋಟೋ ತೆಗೆದಿರುವುದು ನಿಜ ಆದರೆ ನಾನು ಯಾವುದೇ ಸಹಿ ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ಅದೇ ರೀತಿ ಮೃತ ಮಂಜುನಾಥ್ ರವರ ಶವ ಪಂಚನಾಮೆ ಸಮಯದಲ್ಲಿ ನಾನು ಪೋಲಿಸರಿ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-13 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

## ಪಾಟೀ ಸವಾಲು: ಆರೋಪಿ ಪರ ಶ್ರೀ ಕೆ.ಎಸ್.ಎ ವಕೀಲರಿಂದಃ

ನಿಪಿ-2 ಮತ್ತು 3 ನ್ನು ಯಾವ ಉದ್ದೇಶಕ್ಕಾಗಿ ತೆಗೆಯಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ.

## ಮರು ವಿಚಾರಣೆ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1979/2023**

| | | |
|---|---|---|
| ಸಾಕ್ಷಿದಾರರ ಹೆಸರು | : ಸಿರಾಜುದ್ದೀನ್ ಬಿ.ಎ | ಪ್ರಾಸಾ-8 |
| ತಂದೆಯ ಹೆಸರು | : ಅಹಮದ್ ಬಾವ | ಚಾಸಾ-6 |
| ವಯಸ್ಸು | : 41 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕಂಟ್ರಾಕ್ಟರ್ | ದಿನಾಂಕಃ 08.07.2025 |
| ವಾಸಸ್ಥಳ | : ಬಣಕಲ್ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಸದರಿ ಪ್ರಕರಣದಲ್ಲಿರುವ ಮೃತ ಮಂಜುನಾಥ ರವರನ್ನು ನಾನು ಹಿಂದೆ ಎಂದೂ ನೋಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿಲ್ಲ. ಚಾಸಾ-5 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-10 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-10(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಅಮಾನತು ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನಿಪಿ-12(ಬಿ) ಎಂದು ಗುರುತಿಸಲಾಯಿತು. ನಿಪಿ-2, 3 ಮತ್ತು 11 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸುತ್ತಾರೆ.

ಕಳೆದ 1 ವರ್ಷದ ಹಿಂದೆ ಬಣಕಲ್ ಸರ್ಕಲ್ ಬಳಿ ಈ ಮೇಲಿನ ಸಹಿಯನ್ನು ಹಾಕಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರದ ಕುರಿತು ಹಾಕಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ. ಸದರಿ ಸಹಿಯನ್ನು ಪೋಲಿಸರ ಕೋರಿಕೆಯ ಮೇರೆಗೆ ಸಹಿಯನ್ನು ಮಾಡಿರುತ್ತೇನೆ. ನಿಪಿ-10 ಮತ್ತು 12 ರಲ್ಲಿ ಏನನ್ನು ಬರೆಯಲಾಗಿದೆ ಎಂದು ನಾನು ಓದಿ ತಿಳಿದುಕೊಂಡಿರುವುದಿಲ್ಲ ಮತ್ತು ಪೋಲಿಸರು ನನಗೆ ಓದಿ ತಿಳಿದಿರುವುದಿಲ್ಲ. ನಿಪಿ-2, 3 ಮತ್ತು 11 ನ್ನು ಸದರಿ ಸಮಯದಲ್ಲಿ ತೆಗೆದಿರುತ್ತಾರೆ. ಪೋಲಿಸರು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಿಪಿ-10 ಮುತ್ತ 12 ಕ್ಕೆ ಸಹಿ ಮಾಡುವಾಗ ಸಂಜೆ ಸಮಯವಾಗಿತ್ತು. ನನ್ನ ಜೊತೆ ಚಾಸಾ-5 ರವರು ಸಹಿ ಮಾಡಿರುತ್ತಾರೆ. ನಾನು ಯಾವುದೇ ಘಟನೆಯ ಪ್ರತ್ಯಕ್ಷ ದರ್ಶಿಯಲ್ಲ. ಇದನ್ನು ಹೊರತುಪಡಿಸಿ ನನಗೆ ಇನ್ಯಾವುದೇ ವಿಚಾರ ತಿಳಿದಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಈಗ ಓದಿ ಹೇಳಿದಂತೆ ದಿ.14.05.2023 ಮತ್ತು 15.07.2023 ರಂದು ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿಯು ಸಂಪೂರ್ವಾಗಿ ಅಲ್ಲಗಳೆದಿದ್ದು ಸದರಿ ಹೇಳಿಕೆಯ ಭಾಗವನ್ನು ನಿಪಿ-14 ಮತ್ತು 15 ಎಂದು ಗುರುತಿಸಲಾಯಿತು. ನಿಪಿ-10, 12, 14 ಮತ್ತು 15 ರಲ್ಲಿರುವ ವಿಚಾರದ ಬಗ್ಗೆ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ ಕೆ.ಎಸ್.ಎ ವಕೀಲರಿಂದಃ**

ನಾನು ನಿಪಿ-10 ಮತ್ತು 12 ಕ್ಕೆ ಸಹಿ ಮಾಡುವ ಕಾಲದಲ್ಲಿ ಅದಲ್ಲಿ ಯಾವುದೆ ಅಂಶಗಳು ನಮೂದಿಸಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ. ನಿಪಿ-2, 3 ಮತ್ತು 11 ನ್ನು ಯಾವ ಉದ್ದೇಶಕ್ಕಾಗಿ ತೆಗೆಯಲಾಗಿರುತ್ತದೆ ಎಂದು ನನಗೆ ತಿಳಿದಿರುವುದಿಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.